(ಗೊಂದಲ)

ಅಧ್ಯಕ್ಷರು: ಈಗ ವಿಧೇಯಕವನ್ನು ಮಂಡಿಸುವುದು.

(ಗೊಂದಲ)

ಶ್ರೀ ಪ್ರಮೋದ್ ಮಧ್ವರಾಜ್: ಬಡವರ ಸಮಸ್ಯೆ ಇದೆ. . .. .

(ಗೊಂದಲ)

5. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 2015

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು)(ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆಯನ್ನು ಮಂಡಿಸಲಾಯಿತು.

(ಗೊಂದಲ)

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ, 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ವಿಧೇಯಕ ಮಂಡಿಸಲು ಅನುಮತಿ ನೀಡಲಾಯಿತು)

(ಗೊಂದಲ)

ಅಧ್ಯಕ್ಷರು: ಸಚಿವರು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು)(ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–2)

ವಿಧೇಯಕವನ್ನು ಮಂಡಿಸಲಾಯಿತು

(ಗೊಂದಲ)

ಅಧ್ಯಕ್ಷರು: ಈಗ ಸದನವನ್ನು ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 11 ಗಂಟೆ 25 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ: 23.03.2015 ರ ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಸಮಾವೇಶಗೊಳ್ಳುವಂತೆ ನಿಶ್ಚಯಿಸಿತು.)

***